**ಕರ್ನಾಟಕ ಸರ್ಕಾರ**

ಸಂಖ್ಯೆ:ನಅಇ 141 ಬಿಎಂಆರ್ 2015.

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ:08-12-2015.

**ಅಧಿಸೂಚನೆ**

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 63 ಟಿಟಿಪಿ 96, ದಿನಾಂಕ: 27-01-1997 ಮತ್ತು ನಅಇ 134 ಬೆಂರೂಪ್ರಾ 2006, ದಿನಾಂಕ:15-02-2007 ರನ್ವಯ ಘೋಷಿಸಲಾಗಿರುವ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961 ರ ಕಲಂ 4(ಎ)(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಕರ್ನಾಟಕ ಸರ್ಕಾರವು ದಿನಾಂಕ:08-12-2015 ರಿಂದ ಜಾರಿಗೆ ಬರುವಂತೆ ದೊಡ್ಡಬಳ್ಳಾಪುರ ತಾಲ್ಲೂಕು, ಮಧುರೆ ಹೋಬಳಿಯ 37 ಗ್ರಾಮಗಳನ್ನು ಹೆಚ್ಚುವರಿಯಾಗಿ ಸೇರಿಸಿ ಸ್ಥಳೀಯ ಯೋಜನಾ ಪ್ರದೇಶವನ್ನು ವಿಸ್ತರಿಸಲಾಗಿದೆ. ಈಗ ಪ್ರಸ್ತುತ ಹೊಸದಾಗಿ ಸೇರ್ಪಡೆಯಾಗಿರುವ ಗ್ರಾಮಗಳು ಹಾಗೂ ಹಾಲಿ ಇದ್ದ 345 ಗ್ರಾಮಗಳನ್ನು ಒಳಗೊಂಡ ಸ್ಥಳೀಯ ಯೋಜನಾ ಪ್ರದೇಶದ ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. ಹಾಗೆಯೇ ಅನುಬಂಧ-2 ರಲ್ಲಿ ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶದ ಎಲ್ಲೆಯ ವಿವರಣೆಯನ್ನು ನಮೂದಿಸಲಾಗಿದೆ.

ಸದರಿ ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶವನ್ನು ವ್ಯವಸಾಯ ವಲಯವೆಂದು ಪರಿಗಣಿಸಲು ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಎ)(4) ರಲ್ಲಿನ ಅವಕಾಶದನ್ವಯ ವಿಸ್ತರಿತ ಪ್ರದೇಶದಲ್ಲಿ ಈಗಾಗಲೇ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ನೀಡಿರುವ ಹಾಗೂ ಭೂ ಅನ್ಯಕ್ರಾಂತಗೊಂಡಿರುವ ಪ್ರಕರಣಗಳನ್ನು ಸಂರಕ್ಷಿಸಿ ಚಾಲ್ತಿಯಲ್ಲಿರುವ ವಲಯ ನಿಯಮಾವಳಿಗಳನ್ನು ಮಹಾಯೋಜನೆಯನ್ನು ಪರಿಷ್ಕರಿಸಿ ಅನುಮೋದನೆಯನ್ನು ಪಡೆಯುವವರೆಗೂ ಅಳವಡಿಸಬಹುದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ನೆಲಮಂಗಲ ಯೋಜನಾ ಪ್ರಾಧಿಕಾರ
ಸಂಖ್ಯೆ 2008
ದಿನಾಂಕ 14-12-15
ಸದಸ್ಯ ಕಾರ್ಯದರ್ಶಿ
ನೆ. ಯೋ. ಪ್ರಾ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು (ಸದರಿ ಆದೇಶವನ್ನು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಇವರಿಗೆ ಹಾಗೂ 50 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಒದಗಿಸುವಂತೆ ಕೋರುತ್ತಾ).

**ಪ್ರತಿ:**

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.
3) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
4) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು.
5) ಸದಸ್ಯ ಕಾರ್ಯದರ್ಶಿ, ನೆಲಮಂಗಲ ಯೋಜನಾ ಪ್ರಾಧಿಕಾರ, ನೆಲಮಂಗಲ.
6) ಶಾಖಾ ರಕ್ಷಾ ಕಡತ.
7) ಹೆಚ್ಚುವರಿ ಪ್ರತಿ.